**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಮನಗರ**
**ಘನ ನ್ಯಾಯಾಲಯದಲ್ಲಿ**

**ಪ್ರಕರಣ ಸಂಖ್ಯೆಃ ಎಸ್.ಸಿ 26/2020**

ದಿನಾಂಕಃ 06.09.2021
(ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.)

ಪ್ರಾ.ಸಾಃ 6 (ಚಾ.ಸಾ.6)

| | | |
|---|---|---|
| ಹೆಸರು | ಃ | ಫರೀದ್ ಖಾನ್ |
| ತಂದೆಯ ಹೆಸರು | ಃ | ಬೂಡಾನ್ ಖಾನ್ |
| ವಯಸ್ಸು | ಃ | 30 ವರ್ಷ |
| ಉದ್ಯೋಗ | ಃ | ಕೂಲಿ ಕೆಲಸ |
| ವಾಸ ಸ್ಥಳ | ಃ | ಚನ್ನಪಟ್ಟಣ |

**ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಅಭಿಯೋಜಕರಿಂದಃ**

ನನಗೆ ಆರೋಪಿ ಹಾಗು ಚಾಸಾ.2 ಗೊತ್ತು.

2. ತಾಃ 21.01.2020 ರಂದು ಮಧ್ಯಾಹ್ನ 1.30 ರ ಸಮಯದಲ್ಲಿ ಚನ್ನಪಟ್ಟಣ ಆಲ್ ಅಮಿನ್ ಶಾಲೆಯ ರಸ್ತೆಯಲ್ಲಿ ಗಲಾಟೆಯಾಗಿತ್ತು ಎಂದು ಪೊಲೀಸರು ಬಂದು ಮಹಜರ ಮಾಡಿದರು. ಗಲಾಟೆಯಾದ ಸ್ಥಳವನ್ನು ಸಿಮ್ರಾನ್ ತೋರಿಸಿದರು. ಪೊಲೀಸರು ಸ್ಥಳದಲ್ಲಿ ಮಹಜರ ಮಾಡಿ ಅಲ್ಲಿ ಬಿದ್ದಿದ್ದ ರಕ್ತವಾಗಿದ್ದ ಮಣ್ಣು ಹಾಗು ಬೇರೆ ಮಣ್ಣನ್ನು ತೆಗೆದುಕೊಂಡರು. ಮಹಜರಿಗೆ ನನ್ನ ಸಹಿ ಪಡೆದರು. ಸಾಕ್ಷಿಯು ನಿಪಿ.2 - ಸ್ಥಳ ಮಹಜರಲ್ಲಿರುವ ತಮ್ಮ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ.2(ಸಿ) ಎಂದು ಗುರುತಿಸಲಾಯಿತು.

ಸಾಕ್ಷಿ ನೋಡಿ ಗುರುತಿಸಿದ ಸಾದಾ ಮಣ್ಣು ಹಾಗು ರಕ್ತವಾದ ಮಣ್ಣನ್ನು ಈಗಾಗಲೇ ಕ್ರಮವಾಗಿ ಎಂ.ಓ.1 ಮತ್ತು 2 ಎಂದು ಗುರುತಿಸಲಾಗಿದೆ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ.ಕೆವಿಕೆ., ವಕೀಲರಿಂದಃ**

3. ಮಹಜರಿಗೆ ಬರುವಂತೆ ಪೊಲೀಸರು ನನಗೆ ಲಿಖಿತ ನೋಟೀಸ್ ಕೊಟ್ಟಿರಲಿಲ್ಲ, ಆದರೆ ಕರೆದಿದ್ದರು. ನಾನು ಬೆಂಗಳೂರಿನ ಯಶವಂತಪುರದಲ್ಲಿ ತರಕಾರಿ ಲೋಡ್ ಮಾಡುವ ಕೆಲಸ ಮಾಡಿಕೊಂಡಿದ್ದೇನೆ. ನಾನು ಪ್ರತಿದಿನ ಚನ್ನಪಟ್ಟಣದಿಂದ ಬೆಂಗಳೂರಿಗೆ ಕೆಲಸಕ್ಕೆ ಹೋಗಿ ಬಂದು ಮಾಡುತ್ತೇನೆ.

4. ನಾನು ಲೋಡ್ ಬೇಗ ಆದ ದಿನ ಮಧ್ಯಾಹ್ನ 2 ಗಂಟೆಗೆ ಲಾರಿಯ ಜೊತೆ ಬೆಂಗಳೂರಿಗೆ ಹೋಗುತ್ತೇನೆ. ಖಾಲಿ ಲಾರಿಯಲ್ಲಿ ಬೆಂಗಳೂರಿಗೆ ಹೋಗಿ ಅಲ್ಲಿ ಲೋಡ್ ಮಾಡಿಕೊಂಡು ಬರುತ್ತೇವೆ. ನಿಪಿ.2 - ಮಹಜರಿನಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ ಅಂದರೆ ಸಾಕ್ಷಿ ಹೊಡೆದಿದ್ದರಿಂದ ಸ್ಥಳದಲ್ಲಿ ಮಹಜರ ಮಾಡುತ್ತಿದ್ದೇವೆ ಎಂದು ಬರೆದಿದ್ದಾರೆ ಎಂದು ನುಡಿದಿದ್ದಾರೆ.

5. ನಿಪಿ.2 ಕ್ಕೆ ನಾನು ಠಾಣೆಯಲ್ಲಿ ಸಹಿ ಮಾಡಿದ್ದೇನೆ ಅಂದರೆ ಸರಿಯಲ್ಲ. ನನ್ನ ಸಮಕ್ಷಮ ಸ್ಥಳದಲ್ಲಿ ಮಹಜರ ಮಾಡಿಲ್ಲ ಅಂದರೆ ಸರಿಯಲ್ಲ. ಈಗ ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಅಂದರೆ ಸರಿಯಲ್ಲ. ನನ್ನ ಸಮಕ್ಷಮ ಎಂ.ಓ.1 ಮತ್ತು 2 ನ್ನು ಅಮಾನತ್ತುಪಡಿಸಿಕೊಂಡಿಲ್ಲ ಅಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ.**
**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು).**

**ಓ.ಹೇ.ಕೇ.ಸರಿ ಇದೆ ಎಂದು ಸಾಕ್ಷಿ ಒಪ್ಪಿದ್ದಾರೆ.**

(ರಮಾ ಬಿ.ಜಿ)
**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,**
**ರಾಮನಗರ.**